ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.19/2021 ದಿನಾಂಕ: 12.12.2022

## ಪ್ರಕಟಣೆ

### ಕಾಲೇಜು ಶಿಕ್ಷಣ ಇಲಾಖೆಯ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಉರ್ದು ವಿಷಯದ /ಹೆಚ್ಚುವರಿಯಾಗಿ ಅರ್ಹತೆಹೊಂದಿರುವ ಅಭ್ಯರ್ಥಿಗಳಿಗೆ /ಗೈರುಹಾಜರಾದ ಅಭ್ಯರ್ಥಿಗಳಿಗೆ ಮೂಲ ದಾಖಲೆಗಳ ಪರಿಶೀಲನೆ ನಡೆಸುವ ಬಗ್ಗೆ

ಸರ್ಕಾರದ ಪತ್ರ ಸಂಖ್ಯೆ: ಇಡಿ 208 ಡಿಸಿಇ 2022 (ಇ-ಕಡತ) ದಿನಾಂಕ 22.11.2022 ಮತ್ತು ಪತ್ರ ಸಂಖ್ಯೆ: ಇಡಿ 297 ಡಿಸಿಇ 2022 (ಇ) ದಿನಾಂಕ 29.11.2022 ರಲ್ಲಿ, ಮೆರಿಟ್ ಪಟ್ಟಿಯಿಂದ ಆಯ್ಕೆ ಮಾಡುವಾಗ ಮೊದಲಿಗೆ ಹೊಸ ರಿಕ್ತ ಸ್ಥಾನಗಳನ್ನು ಭರ್ತಿ ಮಾಡಿ ತದನಂತರ ಮುಂದಕ್ಕೆ ಕೊಂಡೊಯ್ಯಲಾದ ಹುದ್ದೆಗಳನ್ನು ಭರ್ತಿ ಮಾಡುವಂತೆ ನಿರ್ದೇಶಿಸಿರುವುದರಿಂದ ಹಾಗೂ ಉರ್ದು, ಆರೇಬಿಕ್ ಮತ್ತು ಸಂಸ್ಕೃತ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡುವಾಗ ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಸದರಿ ಹುದ್ದೆಗಳನ್ನು ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲು ನಿರ್ದೇಶಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯಲ್ಲಿನ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಸಂಬಂಧ ಮೂಲ ದಾಖಲೆಗಳ ಪರಿಶೀಲನೆಗೆ ವಿವಿಧ ವಿಷಯಗಳಲ್ಲಿ ಹೆಚ್ಚುವರಿಯಾಗಿ ಅರ್ಹರಾದ ಅಭ್ಯರ್ಥಿಗಳಿಗೆ ದಿನಾಂಕ 19.12.2022 ಮತ್ತು 20.12.2022 ರಂದು ಮೂಲ ದಾಖಲೆಗಳ ಪರಿಶೀಲನೆಯನ್ನು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ 18ನೇ ಕ್ರಾಸ್, ಬೆಂಗಳೂರು ಇಲ್ಲಿ ಕೈಗೊಳ್ಳಲಾಗುವುದು.

ಮೂಲ ದಾಖಲೆಗಳ ಪರಿಶೀಲನೆಗೆ ಗೈರು ಹಾಜರಾದ/ ಅಪೂರ್ಣಗೊಂಡ/ ಉರ್ದು ವಿಷಯದಲ್ಲಿ ಮೂಲ ದಾಖಲೆಗಳ ಪರಿಶೀಲನೆಯನ್ನು ಮುಂದೂಡಲಾಗಿದ್ದ ಅಭ್ಯರ್ಥಿಗಳು ದಿನಾಂಕ 19.12.2022 ಮತ್ತು 20.12.2022 ರಂದು ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವಂತೆ ತಿಳಿಸಿದೆ. ಹೆಚ್ಚುವರಿಯಾಗಿ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಾಧಿಕಾರದ ಅಂತರ್ಜಾಲದಲ್ಲಿ ಶೀಘ್ರದಲ್ಲಿಯೆ ಪ್ರಕಟಿಸಲಾಗುವುದು, ಸದರಿ ಅಭ್ಯರ್ಥಿಗಳು ಸಹ ಮೇಲ್ಕಂಡ ದಿನಾಂಕದೊಳಗೆ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವಂತೆ ತಿಳಿಸಿದೆ.

**ಸೂಚನೆ: ಈಗಾಗಲೇ ದಿನಾಂಕ 09.11.2022 ರಿಂದ 19.11.2022 ವರೆಗೆ ನಡೆಸಲಾದ ಪರಿಶೀಲನಾ ಕಾರ್ಯದಲ್ಲಿ ಒಂದು ವಿಷಯದಲ್ಲಿ ಅರ್ಹಗೊಂಡು ಮೂಲ ದಾಖಲೆಗಳ ಪರಿಶೀಲನೆಯು ಪೂರ್ಣಗೊಂಡಿರುವ ಅಭ್ಯರ್ಥಿಗಳು ಮತ್ತೊಮ್ಮೆ ಅದೇ ವಿಷಯಕ್ಕೆ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವಂತಿಲ್ಲ.**

ಸಹಿ/-
(ಎಸ್.ರಮ್ಯ ಭಾ.ಆ.ಸೇ)
ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru – 560 012.
Phone: 080-2356 4583, 2336 1786, Fax: 080-2346 1576
e-mail : keauthority-ka@nic.in Website : http://kea.kar.nic.in